# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
## ವಾರ್ಡ್ ಸಮಿತಿ ಸಭೆ ದಿನಾಂಕ: 04/06/2022ರ
## ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ–ಸಭೆ –05/2022–23 ದಿನಾಂಕ: 04.06.2022

ದಿನಾಂಕ: 04/06/2022 ರಂದು ಬೆಳಿಗ್ಗೆ 10.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಸಿ.ಎಂ. ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಅಧೀಕ್ಷಕ ಅಭಿಯಂತರರು ಬೃಹತ್ ನೀರುಗಾಲುವೆ ವಿಭಾಗ, ಕೇಂದ್ರ ಕಛೇರಿ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್–198, ಹೆಮ್ಮಿಗೆಪುರ |
| 3 | ಶ್ರೀಮತಿ ಪೂರ್ಣಿಮಾ ಜ.ಬಿ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ಕೆಂಗೇರಿ ವಿಭಾಗ, ಬಿಬಿಎಂಪಿ |
| 4 | ಶ್ರೀ ರವಿಚಂದ್ರ ಚಾರಿ ಟಿ.ಕೆ | ಹಿರಿಯ ಆರೋಗ್ಯಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |
| 5 | ಶ್ರೀಮತಿ ಮೋನಿಕ | ಕಿರಿಯ ಆರೋಗ್ಯಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |
| 6 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 7 | ಶ್ರೀ ಸಚಿನ್ ಮಾಲಗಿ | ಸಹಾಯಕ ಅಭಿಯಂತರರು ಬೀದಿ ದೀಪ ನಿರ್ವಹಣೆ, ರಾರಾನಗರ ವಲಯ, ಬಿಬಿಎಂಪಿ |
| 8 | ಶ್ರೀ ಕೃಷ್ಣಾನಾಯಕ್ | ಕೆಲಸ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |



Scanned by CamScanner

| ಕ್ರ.ಸಂ | ಸಭೆಗೆ ಗೈರು ಹಾಜರಾದ ಅಧಿಕಾರಿಗಳು | ಇಲಾಖೆ |
|---|---|---|
| 1 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೀದಿ ದೀಪ ನಿರ್ವಹಣೆ, ಬಿಬಿಎಂಪಿ, ರಾರಾ ನಗರ ವಲಯ |
| 2 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ರಸ್ತೆ ಮೂಲ ಭೂತ ಸೌಕರ್ಯವಿಭಾಗ, ಬಿಬಿಎಂಪಿ, ರಾರಾನಗರ ವಲಯ |
| 3 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೃಹತ್ ನೀರುಗಾಲುವೆ ವಿಭಾಗ, ಬಿಬಿಎಂಪಿ, ರಾರಾನಗರ ವಲಯ |
| 4 | ಪಶುಪಾಲನಾ ಅಧಿಕಾರಿಗಳು | ಪಶುಪಾಲನಾ ಇಲಾಖೆ, ಬಿಬಿಎಂಪಿ ರಾಜರಾಜೇಶ್ವರಿನಗರ ವಲಯ, |
| 5 | ವಲಯ ಅರಣ್ಯ ಅಧಿಕಾರಿಗಳು | ಅರಣ್ಯ ಇಲಾಖೆ, ಬಿಬಿಎಂಪಿ, ರಾಜರಾಜೇಶ್ವರಿನಗರ ವಲಯ, |
| 6 | ತೋಟಗಾರಿಕಾ ಅಧಿಕ್ಷಕರು | ತೋಟಗಾರಿಕೆ ಇಲಾಖೆ, ಬಿಬಿಎಂಪಿ, ರಾಜರಾಜೇಶ್ವರಿನಗರ ವಲಯ, |
| 7 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೆಂಗಳೂರು ಜಲ ಮಂಡಳಿ |
| 8 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೆಸ್ಕಾಂ, ಕೆಂಗೇರಿ ಮತ್ತು ಬೆಸ್ಕಾಂ ತಲಘಟ್ಟಪುರ |
| 9 | ಪೊಲೀಸ್ ಇಲಾಖೆ | ಕೆಂಗೇರಿ, ರಾಜರಾಜೇಶ್ವರಿನಗರ ಮತ್ತು ರಲಘಟ್ಟಪುರ ಪೊಲೀಸ್ ಠಾಣೆ |
| 10 | ಗುತ್ತಿಗೆದಾರರು | ಘನತ್ಯಾಜ್ಯ ನಿರ್ವಹಣೆ, ಹೆಮ್ಮಿಗೆಪುರ ವಾರ್ಡ್ ನಂ.198 |
| 11 | ಕಿರಿಯ ಆರೋಗ್ಯ ಪರಿವೀಕ್ಷಕರು | ಘನತ್ಯಾಜ್ಯ ನಿರ್ವಹಣೆ, ಹೆಮ್ಮಿಗೆಪುರ ವಾರ್ಡ್ ನಂ.198 |
| 12 | ಹಿರಿಯ ಆರೋಗ್ಯ ಪರಿವೀಕ್ಷಕರು | ಘನತ್ಯಾಜ್ಯ ನಿರ್ವಹಣೆ, ಹೆಮ್ಮಿಗೆಪುರ ವಾರ್ಡ್ ನಂ.198 |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳನ್ನು ಹಾಗೂ ಸಭೆಯಲ್ಲಿ



Scanned by CamScanner

ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ **ವಿದ್ಯುತ್ ಬೀದಿ ದೀಪಗಳ ನಿರ್ವಹಣೆ** :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಹೊಸ ವಿದ್ಯುತ್ ದೀಪಗಳ ಫಿಟ್ಟಿಂಗ್‌ಗಳನ್ನು ಅಳವಡಿಸಲು ಹಾಗೂ ಕಂಬದಲ್ಲಿರುವ ವಿದ್ಯುತ್ ಬೀದಿ ದೀಪಗಳನ್ನು ಗುತ್ತಿಗೆದಾರರು ಬಿಚ್ಚುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು ಹಾಗೂ ಬಾಲಾಜಿ ಬಡಾವಣೆಯ ಉದ್ಯಾನವನದಲ್ಲಿ ವಿದ್ಯುತ್ ದೀಪದ ವ್ಯವಸ್ಥೆ ಇಲ್ಲದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಸಭೆಯಲ್ಲಿ ಪಾಲಿಕೆಯ ವಿದ್ಯುತ್ ದೀಪ ವಿಭಾಗಕ್ಕೆ ಸಂಬಂಧಿಸಿದ ಯಾವ ಒಬ್ಬರು ಅಧಿಕಾರಿಯೂ ಕಳೆದ 08 ಸಭೆಗಳಿಗೆ ಹಾಜರಾಗದೇ ಇರುವುದನ್ನು ಗಮನಿಸಲಾಗಿದ್ದು, ಮತ್ತು ಇದರಿಂದಾಗಿ ಸಮಸ್ಯೆಗಳನ್ನು ಪರಿಹರಿಸಲು ತೊಂದರೆಯಾಗುತ್ತಿದ್ದು, ಸಂಬಂಧಿಸಿದ ಅಧಿಕಾರಿಗಳ ನಿರಂತರವಾಗಿ ವಾರ್ಡ್ ಕಮಿಟಿ ಸಭೆಗೆ ಗೈರುಹಾಜರಾಗುತ್ತಿರುವ ಬಗ್ಗೆ ವಾರ್ಡ್‌ನ ನಾಗರೀಕರು ಹಾಗೂ ನೋಡಲ್ ಅಧಿಕಾರಿಗಳು ಅಸಮದಾನ ವ್ಯಕ್ತಪಡಿಸಿ, ವಿದ್ಯುತ್ ವಿಭಾಗದ ಕಾರ್ಯಪಾಲಕ ಅಭಿಯಂತರರಿಗೆ ದೂರವಾಣಿ ಮೂಲಕ ಕರೆ ಮಾಡಿ ವಾರ್ಡ್‌ನಲ್ಲಿ ಹೆಚ್ಚಿನದಾದ ಬೀದಿ ದೀಪಗಳ ಸಮಸ್ಯೆಗಳು ಉಂಟಾಗುತ್ತಿದ್ದು, ಸದರಿ ಸಮಸ್ಯೆಗಳನ್ನು ಪರಿಹರಿಸಲು ಯಾವು ಒಬ್ಬ ಅಧಿಕಾರಿಯವರೂ ಸಹ ಸಭೆಗೆ ಹಾಜರಾಗದೇ ಅನಾನುಕೂಲವಾಗಿರುವುದಕ್ಕೆ ದೂರವಾಣಿ ಮುಖಾಂತರ ನೋಡಲ್ ಅಧಿಕಾರಿಯವರು ಪಸ್ತಾಪಿಸಿದರು. ನಂತರ ಶ್ರೀ ಸಚಿನ್ ಎಂಬುವವರು ಸಭೆಗೆ ಹಾಜರಾಗಿ ಸದರಿ ವಿದ್ಯುತ್ ದೀಪಗಳ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಆಲಿಸಿ ಸಮಸ್ಯೆಯನ್ನು ಪರಿಹರಿಸಿಕೊಡಲಾಗುವುದೆಂದು ಸಭೆಗೆ ತಿಳಿಸಿದರು.

❖ **ಘನತ್ಯಾಜ್ಯ ನಿರ್ವಹಣೆ** :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯ ಹಳೆ ಕನಕಪುರ ರಸ್ತೆಯಲ್ಲಿ ಮತ್ತು ಬಿ.ಡಬ್ಲ್ಯೂ.ಎಸ್.ಎಸ್.ಬಿ. ಪೈಪ್‌ಲೈನ್ ರಸ್ತೆಯಲ್ಲಿ ಸಾರ್ವಜನಿಕರು ಹಾಗೂ ದಾರಿ ಹೋಕರು ತ್ಯಾಜ್ಯವನ್ನು ರಸ್ತೆಯಲ್ಲಿ ಎಸೆದು ಹೋಗುತ್ತಿರುವ ಬಗ್ಗೆ ಹಾಗೂ ಬಾಲಾಜಿ ಬಡಾವಣೆಯಲ್ಲಿರುವ ಒಣ ತ್ಯಾಜ್ಯ ನಿರ್ವಹಣಾ ಕೇಂದ್ರದ ಸುತ್ತಲೂ ಶೀಟ್‌ಗಳನ್ನು ಅಳವಡಿಸಲು ಸೂಕ್ತ ಕ್ರಮ ಕೈಗೊಳ್ಳಲು ಸಭೆಯ ಗಮನಕ್ಕೆ ಮತ್ತೊಮ್ಮೆ ಕೋರಿದರು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಘನತ್ಯಾಜ್ಯ ನಿರ್ವಹಣೆ ವಿಭಾಗದ ಸಾಹಯಕ ಕಾರ್ಯಪಾಲಕ ಅಭಿಯಂತರರಿಗೆ ಸದರಿ ಸಮಸ್ಯೆಯ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲು ಕೋರಲಾಗಿ ಸಭೆಯಲ್ಲಿ ಹಾಜರಿದ್ದ ಹಿರಿಯ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದರು. ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಹೆಮ್ಮಿಗೆಪುರ ವಾರ್ಡ್ ಪ್ರದೇಶವು ತುಂಬಾ ದೊಡ್ಡದಾಗಿದ್ದು ಒಬ್ಬ ಮಾರ್ಷಲ್‌ರವರಿಂದ ಪೂರ್ಣ ವಾರ್ಡಿನಾದ್ಯಂತ ಸಂಚರಿಸಿ ಇಂತಹ ಪ್ರಕರಣಗಳಿಗೆ ಕಡಿವಾಣ



Scanned by CamScanner

ಹಾಕುವುದು ಕಷ್ಟ ಸಾಧ್ಯವಾಗಿರುತ್ತದೆ. ಈ ಸಂಬಂಧ ಕನಿಷ್ಠ 03 ಸಂಖ್ಯೆ ಮಾರ್ಷಲ್‌ಗಳನ್ನು ವಾರ್ಡ್‌ಗೆ ಒದಗಿಸಬೇಕೆಂದು ಸಭೆಗೆ ಕೋರಿದರು. ಹೆಮ್ಮಿಗೆಪುರ ವಾರ್ಡ್ ಪ್ರದೇಶವು 30.00 ಚದರ ಕಿ.ಮೀ. ವಿಸ್ತೀರ್ಣವಿದ್ದು 03 ಜನ ಮಾರ್ಷಲ್‌ಗಳ ಅವಶ್ಯಕತೆ ಇರುವ ಬಗ್ಗೆ, ನೇಮಕ ಮಾಡಲು ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಲಾಯಿತು.

❖ **ಯೋಜನಾ ವಿಭಾಗ, ರಾರಾನಗರ ವಲಯ** :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಿಹೆಚ್‌ಇಎಲ್ ಬಡಾವಣೆಯ ಕಿತ್ತೂರು ರಾಣಿ ಚೆನ್ನಮ್ಮ ಉದ್ಯಾನವನದಲ್ಲಿ ಇರುವ ಮಕ್ಕಳ ಆಟಿಕೆಯ ವಸ್ತುಗಳು ಸಂಪೂರ್ಣ ಹಾಳಾಗಿದ್ದು, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ವಲಯದ ಯೋಜನಾ ವಿಭಾಗದ ವತಿಯಿಂದ ದುರಸ್ಥಿಪಡಿಸಲು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

❖ **ಬೆಂಗಳೂರು ಜಲ ಮಂಡಳಿ(110 ಹಳ್ಳಿ ಯೋಜನೆಯ ವಿಭಾಗ)** :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ 11ನೇ-ಡಿ ಕ್ರಾಸ್, ಮನೆ ನಂ.529 ಸ್ಕಂದ ನಿಲಯದ ಮುಂಭಾಗ 110 ಹಳ್ಳಿ ಯೋಜನೆಯಡಿ ನಿರ್ಮಾಣ ಮಾಡಿರುವ ನೂತನ ಮ್ಯಾನ್‌ಹೋಲ್ ಮಳೆಬಂದ ಸಂಧರ್ಭದಲ್ಲಿ ಉಕ್ಕಿ ಹರಿದು ಮನೆಗಳಿಗೆ ನೀರು ನುಗ್ಗುತ್ತಿದ್ದು, ಇದನ್ನು ಪರಿಹರಿಸಬೇಕೆಂದು ಸಭೆಗೆ ಕೋರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಿಸಿದ ಜಲ ಮಂಡಳಿ ಅಧಿಕಾರಿಗಳು ಸಭೆಗೆ ಸತತವಾಗಿ ಗೈರುಹಾಜರಾಗುತ್ತಿರುವುದನ್ನು ಕಂಡು ಅಸಮಧಾನ ವ್ಯಕ್ತಪಡಿಸಿದರು. ಈ ಸಂಬಂಧ ಪ್ರತಿ ವಾರ್ಡ್ ಕಮಿಟಿ ಸಭೆಗೆ ಹಾಜರಾಗಲು ಸೂಚಿಸಿ ಪತ್ರ ಬರೆಯಲು ಮತ್ತು ಮೇಲ್ಕಂಡ ದೂರಿನ ಸಂಬಂಧ ಸೂಕ್ತ ಪರಿಹಾರ ಕೆಲಸ ಕೈಗೊಳ್ಳಲು ಜಲಮಂಡಳಿ ಅಧಿಕಾರಿಗಳಿಗೆ ಸೂಚಿಸಿದರು.

❖ **ವಾರ್ಡ್‌ನ ಕಾಮಗಾರಿಗಳು** :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಭಾಗಶಃ ರಸ್ತೆ ಗುಂಡಿಗಳನ್ನು ಮುಚ್ಚಿದ್ದು, ಉಳಿಕೆ ಗುಂಡಿಗಳನ್ನು ಶೀಘ್ರವಾಗಿ ಮುಚ್ಚಲು ಸಭೆಯ ಗಮನಕ್ಕೆ ಕೋರಲಾಯಿತು. ಈ ಸಂಬಂಧ ಸಭೆಯಲ್ಲಿಲ್ಹಾಜರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಮುಂದಿನ ವಾರದಲ್ಲಿ ರಸ್ತೆಯ ಎಲ್ಲಾ ಗುಂಡಿಗಳನ್ನು ಮುಚ್ಚಿಸಲಾಗುವುದೆಂದು ಸಭೆಗೆ ತಿಳಿಸಿದರು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ



Scanned by CamScanner

<u>ಪ್ರತಿಯನ್ನು:-</u>

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಾರ್ಯಪಾಲಕ ಅಭಿಯಂತರರು (ವಿದ್ಯುತ್ ವಿಭಾಗ) ರಾರಾನಗರ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8) ಕಾರ್ಯಪಾಲಕ ಅಭಿಯಂತರರು (ಯೋಜನಾ ವಿಭಾಗ), ರಾರಾನಗರ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
10) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ (110 ಹಳ್ಳಿ ಯೋಜನಾ ಉಪವಿಭಾಗ) ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
13) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ-ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ-ತಲಘಟ್ಟಪುರ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
17) ಪಶು ಸಂಗೋಪನ ಅಧಿಕಾರಿಗಳು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.



Scanned by CamScanner

18) ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ರಾರಾನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

19) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ಕೆಂಗೇರಿ ಸಂಚಾರಿ ಪೊಲೀಸ್‌ಠಾಣೆ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

20) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ತಲಘಟ್ಟಪುರ ಪೊಲೀಸ್‌ಠಾಣೆ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

21) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ರಾಜರಾಜೇಶ್ವರಿನಗರ ಪೊಲೀಸ್‌ಠಾಣೆ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

22) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ಕೆಂಗೇರಿ ಪೊಲೀಸ್‌ಠಾಣೆ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.



Scanned by CamScanner